142 ನೇ

ನಿ-330 - 30

ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಡಾ॥ ವೈ.ಎ.ನಾರಾಯಣಸ್ವಾಮಿ ಇವರು ನಿಯಮ-**330**ರ ಅಡಿಯಲ್ಲಿ ನೀಡಿರುವ ಸೂಚನಾ ಪತ್ರಕ್ಕೆ ಸರ್ಕಾರದ ಉತ್ತರ.

ವಿಷಯ:

ಅನುದಾನಿತ ಮತ್ತು ಅನುದಾನ ರಹಿತ ಶಾಲಾ ಶಿಕ್ಷಕರಿಗೆ ಕಾಲ್ಪನಿಕ ವೇತನ ಬಡ್ತಿ ನೀಡದಿರುವುದರಿಂದ ತುಂಬಾ ಅನ್ಯಾಯವಾಗಿದ್ದು, ಈ ಶಿಕ್ಷಕರಿಗೆ ಕಾಲ್ಪನಿಕ ವೇತನ ನೀಡುವ ವಿಚಾರದ ಬಗ್ಗೆ ಪ್ರಸ್ತಾಪಿಸಿರುತ್ತಾರೆ.

ಉತ್ತರ:

ಅನುದಾನ ಸಂಹಿತೆಯ ಪ್ರಕಾರ ಅನುದಾನಕ್ಕೊಳಪಟ್ಟ ಸಿಬ್ಬಂದಿಗೆ ಅನುದಾನ ದೊರೆತ ದಿನಾಂಕದಿಂದ ಮಾತ್ರ ಕನಿಷ್ಠ ವೇತನ ನಿಗದಿ ಮಾಡಬೇಕು ಹಾಗೂ ಹಿಂದಿನ ಸೇವಾವಧಿಯನ್ನು ಯಾವುದೇ ಸೇವಾ ಸೌಲಭ್ಯಕ್ಕೆ ಪರಿಗಣಿಸುವಂತಿಲ್ಲ. ಈ ಸಂಬಂಧ ಸರ್ಕಾರವು ದಿನಾಂಕ:01.06.1995ರಿಂದಲೇ ಪೂರ್ವಾನ್ವಯವಾಗಿ ಜಾರಿಗೆ ಬರುವಂತೆ ಕರ್ನಾಟಕ ಖಾಸಗಿ ಅನುದಾನಿತ ಶೈಕ್ಷಣಿಕ ಸಂಸ್ಥೆಗಳ ಸಿಬ್ಬಂದಿಗಳ (ವೇತನ, ನಿವೃತ್ತಿ ವೇತನ ಮತ್ತು ಇತರೆ ಸೌಲಭ್ಯಗಳ ನಿಯಂತ್ರಣ) ಅಧಿನಿಯಮ 2014ನ್ನು ಜಾರಿಗೆ ತರಲಾಗಿದೆ.

ಈ ಅಧಿನಿಯಮವನ್ನು ಅನುದಾನಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಗಳು ಪ್ರಶ್ನಿಸಿರುವ ರಿಟ್ ಅರ್ಜಿಗಳಾದ 21216/2014 ಮತ್ತು 14307/2014 ಮತ್ತು ತತ್ಸಬಂಧದ ಪ್ರಕರಣಗಳಲ್ಲಿ ಮಾನ್ಯ ಉಚ್ಚನ್ಯಾಯಾಲಯವು ದಿನಾಂಕ:10.07.2015ರಂದು ನೀಡಿದ ತೀರ್ಪಿನಲ್ಲಿ ಸದರಿ ಅಧಿನಿಯಮವನ್ನು "struck down" ಮಾಡಿರುತ್ತದೆ.

ಮೇಲಿನ ಮಾನ್ಯ ನ್ಯಾಯಾಲಯದ ತೀರ್ಪನ್ನು ಪ್ರಶ್ನಿಸಿ ಸರ್ಕಾರವು ಮಾನ್ಯ ಉಚ್ಚ ನ್ಯಾಯಾಲಯ, ಬೆಂಗಳೂರು ಇಲ್ಲಿ ರಿಟ್ ಅಪೀಲು ಸಂಖ್ಯೆ:2476/2015 ಮತ್ತು 2467/2015ನ್ನು ದಾಖಲಿಸಿದೆ. ಮೇಲಿನ ರಿಟ್ ಅರ್ಜಿಗಳಲ್ಲಿ ನೀಡಿದ ತೀರ್ಪಿಗೆ ದಿನಾಂಕ:27.11.2015ರಂದು ತಡೆಯಾಜ್ಞೆ ನೀಡಿರುತ್ತದೆ. ಸದರಿ ತಡೆಯಾಜ್ಞೆಯು ಪ್ರಸ್ತುತ ಜಾರಿಯಲ್ಲಿದ್ದು, ಪ್ರಕರಣವು ಮಾನ್ಯ ನ್ಯಾಯಾಲಯದಲ್ಲಿ ಬಾಕಿಯಿರುತ್ತದೆ.

ಕರ್ನಾಟಕ ಶಿಕ್ಷಣ ಸಂಸ್ಥೆಗಳು ( ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಂಸ್ಥೆಗಳ ನೌಕರರ ನೇಮಕಾತಿ ಮತ್ತು ಸೇವಾ ಷರತ್ತು ಹಾಗೂ ನಿಬಂಧನೆಗಳು) ನಿಯಮಗಳು 1999ರ ಅನುಬಂಧ-II (3) ರನ್ವಯ ಹಿಂದಿನ ಅನುದಾನರಹಿತ ಸೇವಾವಧಿಯನ್ನು ಯಾವುದೇ ಸೇವಾ ಸೌಲಭ್ಯಕ್ಕೆ ಪರಿಗಣಿಸುವಂತಿಲ್ಲ. ಅನುದಾನಕೊಳಪಟ್ಟ ಸಿಬ್ಬಂದಿಗಳಿಗೆ ಅನುದಾನ ದೊರೆತ ದಿನಾಂಕದಿಂದ ಕನಿಷ್ಠ ವೇತನ ನಿಗದಿ ಮಾಡಿ , ವೇತನವನ್ನು ವಿತರಿಸುತ್ತಿರುವುದರಿಂದ ಅನುದಾನಿತ ಶಿಕ್ಷಕರಿಗೆ ಯಾವುದೇ ಅನ್ಯಾಯವಾಗಿರುವುದಿಲ್ಲ.

ಸಂ: ಇಪಿ380ಎಸ್‌ಇಎಸ್ 2020

S. S—

(ಎಸ್. ಸುರೇಶ್ ಕುಮಾರ್)

ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ

ಹಾಗೂ ಸಕಾಲ ಸಚಿವರು